**ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ದಿನಾಂಕ:15-04-2020 ರಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ನಡೆದ ವಿಡೀಯೊ ಸಂವಾದ ಕಾರ್ಯಕ್ರಮದ ನಡವಳಿಗಳು.**

ಕೋವಿಡ್ - 19 ರ ಸದ್ಯದ ಪರಿಸ್ಥಿತಿಯಲ್ಲಿ ಇಲಾಖೆಯಿಂದ ಆದ್ಯತೆ ಮೇರೆಗೆ ಕೈಗೊಳ್ಳಬೇಕಾದ ಕಾರ್ಯ ಚಟುವಟಿಕೆಗಳ ಕುರಿತು ವಿಡಿಯೋ ಸಂವಾದವನ್ನು ನಡೆಸಲಾಗಿದ್ದು, ಪ್ರಮುಖವಾಗಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ , ಗ್ರಾಮೀಣ ಕುಡಿಯುವ ನೀರು ಸರಬರಾಜು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಕಾರ್ಯಪಡೆ ಚಟುವಟಿಕೆಗಳ ಪರಿಶೀಲನೆ ನಡೆಸಿ ಈ ಕೆಳಕಂಡ ಸಲಹೆ ಸೂಚನೆಗಳನ್ನು ನೀಡಲಾಯಿತು.

## ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ

1. ಸದ್ಯದ ಪರಿಸ್ಥಿತಿಯಲ್ಲಿ ಗ್ರಾಮೀಣ ಜನರಿಗೆ ಉದ್ಯೋಗ ಒದಗಿಸುವುದು ಅತ್ಯಗತ್ಯವಾಗಿದ್ದು, ನರೇಗಾ ಯೋಜನೆಯಡಿ ಸಾಮಾಜಿಕ ಅಂತರವನ್ನು ಕಾಪಾಡುವ ಮೂಲಕ ಹಾಗೂ ಕೂಲಿಗಾರರು ಕಡ್ಡಾಯವಾಗಿ ಸ್ಥಳೀಯವಾಗಿ ಬಟ್ಟೆಯಿಂದ ಸಿದ್ಧಪಡಿಸಿದ ಮಾಸ್ಕ್ ಅನ್ನು ಧರಿಸಿ ಕೆಲಸ ನಿರ್ವಹಿಸಲು ಅನುವು ಮಾಡಿಕೊಡುವುದು.

2. ನರೇಗಾ ಯೋಜನೆಯಡಿ ನೀರಾವರಿ ಹಾಗೂ ಜಲಾನಯನ ಸಂಬಂಧಿತ ಕಾಮಗಾರಿಗಳಿಗೆ ಅಧ್ಯತೆ ನೀಡುವುದು.

3. ಕೇಂದ್ರ ಹಾಗೂ ರಾಜ್ಯವಲಯದ ಯೋಜನೆಗಳಡಿ ನೀರಾವರಿ, ಕೃಷಿ ಹಾಗೂ ಜಲಾನಯನ ಅಭಿವೃದ್ಧಿ ಕಾಮಗಾರಿಗಳನ್ನು ನರೇಗಾ ಯೋಜನೆಯಡಿ ಒಗ್ಗೂಡಿಸಿ ಅನುಷ್ಠಾನಗೊಳಿಸಲು ಕ್ರಮವಹಿಸುವುದು.

4. ದಿನಾಂಕ:26-03-2020 ರಂದು ಸರ್ಕಾರದಿಂದ ಈಗಾಗಲೇ ಸುತ್ತೋಲೆ ಹೊರಡಿಸಲಾಗಿದ್ದು, ಅದರಂತೆ ಅವಶ್ಯ ಕ್ರಮ ಒದಗಿಸುವುದು.

5. ನರೇಗಾ ಯೋಜನೆಯಡಿ ಸಮುದಾಯ ಕಾಮಗಾರಿಗಳೆಂದು ಕೇವಲ ಕೆರೆಗಳ ಹೂಳೆತ್ತುವ ಕಾಮಗಾರಿಗಳಿಗೆ ಕೇಂದ್ರಿಕೃತಗೊಳಿಸದೇ ಕೃಷಿ ಚಟುವಟಿಕೆಗಳಾದ ಬದು ನಿರ್ಮಾಣ, ಬದುಗಳ ಪಕ್ಕದಲ್ಲಿ ಗುಂಡಿ ತೋಡುವಿಕೆ, ಕೃಷಿ ಹೊಂಡಗಳ ನಿರ್ಮಾಣ ಚಟುವಟಿಕೆಗಳನ್ನು ಕೈಗೊಳ್ಳಲು ಅಗತ್ಯ ಕ್ರಿಯಾ ಯೋಜನೆ ರೂಪಿಸುವುದು.

6. ಕೃಷಿ ಹೊಂಡಗಳಿಗೆ ಬೇಡಿಕೆ ಇಲ್ಲದಿರುವೆಡೆಗಳಲ್ಲಿ ದನದ ಕೊಟ್ಟಿಗೆ ನಿರ್ಮಾಣ, ಇಂಗು ಗುಂಡಿಗಳು, ತೋಟಗಾರಿಕಾ ಚಟುವಟಿಕೆಗಳು, ಶಾಲಾ ಮತ್ತು ಅಂಗನವಾಡಿಗಳಲ್ಲಿ ಕಿಚನ್ ಗಾರ್ಡನ್ ಅಭಿವೃದ್ಧಿಪಡಿಸಲು ಪೂರ್ವಸಿದ್ಧತೆಯಾಗಿ ಗುಂಡಿಗಳನ್ನು ತೋಡುವಂತಹ ಕೆಲಸಗಳು, ಸರ್ಕಾರಿ ಕಟ್ಟಡಗಳಲ್ಲಿ ಮಳೆ ನೀರು ಕೊಯ್ಲಿಗಾಗಿ ಗುಂಡಿಗಳನ್ನು ಸಿದ್ಧಪಡಿಸುವುದು ಮುಂತಾದ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು.

7. ಅನೇಕ ಗ್ರಾಮಗಳಿಗೆ ವಲಸೆ ಬಂದಿರುವ ಕಾರ್ಮಿಕರಿಗೆ ಗ್ರಾಮದ ನಿವಾಸಿಗಳಾಗಿದ್ದಲ್ಲಿ, ಗ್ರಾಮ ಪಂಚಾಯಿತಿಗಳಿಂದ ದೃಢೀಕರಿಸಿಕೊಂಡು ಅವರಿಗೂ ಸಹಿತ ಜಾಬ್ ಕಾರ್ಡ್ ನೀಡಲು ವ್ಯವಸ್ಥೆ ಮಾಡುವುದು.

8. ಒಟ್ಟಾರೆಯಾಗಿ ಗ್ರಾಮೀಣ ಜನರ ದೈನಂದಿನ ಜೀವನಕ್ಕೆ ಪೂರಕವಾಗಿ ಉದ್ಯೋಗ ಒದಗಿಸಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

**ಗ್ರಾಮೀಣ ಕುಡಿಯುವ ನೀರು ಸರಬರಾಜು**

9. ಇಲಾಖಾ ವತಿಯಿಂದ ಈಗಾಗಲೇ ನೀಡಿರುವ ಸೂಚನೆ / ನಿರ್ದೇಶನದಂತೆ ಕುಡಿಯುವ ನೀರಿಗಾಗಿ ಯಾವುದೇ ಗ್ರಾಮದಲ್ಲಿ ತೊಂದರೆಯಾಗದಂತೆ ಎಲ್ಲಾ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವುದು.

10. ಸರ್ಕಾರದಿಂದ ಘೋಷಣೆಯಾದ ಬರ ಪೀಡಿತ ತಾಲ್ಲೂಕುಗಳಿಗೆ ಹಂಚಿಕೆ ಮಾಡಲಾದ ರೂ. 1.00 ಕೋಟಿ ಅನುದಾನಕ್ಕೆ ಎರಡು ಹಂತಗಳಲ್ಲಿ ಕ್ರಿಯಾ ಯೋಜನೆಯನ್ನು ಜಿಲ್ಲಾಧಿಕಾರಿಗಳೊಂದಿಗೆ ಸಮಾಲೋಚಿಸಿ ಟಾಸ್ಕ್ ಫೋರ್ಸ್ ಸಮಿತಿಯ ಅನುಮತಿಯೊಂದಿಗೆ ಸಿದ್ಧಪಡಿಸುವುದು. ಸದರಿ ಅನುದಾನದಲ್ಲಿ ತಾಲ್ಲೂಕುಗಳಲ್ಲಿ ಸಮಸ್ಯಾತ್ಮಕ ಗ್ರಾಮಗಳಿಗೆ ಬೇಸಿಗೆ ಋತುವಿನಲ್ಲಿ ಶುದ್ಧ ಕುಡಿಯುವ ನೀರನ್ನು ಟ್ಯಾಂಕರ್ ಮುಖಾಂತರ ಪೂರೈಸಲು ಮತ್ತು ಅವಶ್ಯವಿದ್ದಲ್ಲಿ ಖಾಸಗಿ ಕೊಳವೆ ಬಾವಿಗಳ ಬಾಡಿಗೆ ಪಾವತಿಗಾಗಿ ವಿನಿಯೋಗಿಸುವುದು.

11. ಬರ ಘೋಷಣೆಯಾಗದ ತಾಲ್ಲೂಕುಗಳಿಗೆ ತಲಾ ರೂ. 50.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯಿಂದ ಈಗಾಗಲೇ ದಿ:27-03-2020 ರ ಪತ್ರದ ರೀತ್ಯಾ ರೂ. 25.00 ಲಕ್ಷಗಳು ಹಂಚಿಕೆಯಾಗಿದ್ದು, ಅತಿ ತುರ್ತು ಹಾಗೂ ಅವಶ್ಯಕ ಕಾಮಗಾರಿಗಳನ್ನು ತೆಗೆದುಕೊಳ್ಳುವುದು. ಎರಡನೇ ಹಂತದಲ್ಲಿ ಸಮಸ್ಯೆಗಳು ಕಂಡುಬಂದ ಗ್ರಾಮಗಳ ಕ್ರಿಯಾ ಯೋಜನೆಯನ್ನು ರೂ. 25.00 ಲಕ್ಷಗಳಿಗೆ ಸಿದ್ಧಪಡಿಸಿ ಸೂಕ್ತ ಅನುಮೋದನೆ ಪಡೆದು ಅನುಷ್ಠಾನಗೊಳಿಸುವುದು.

12. ಇಲಾಖೆಯಿಂದ ಬಿಡುಗಡೆ ಮಾಡಲಾದ ಅನುದಾನ, ಜಿಲ್ಲಾಧಿಕಾರಿಗಳ ಬಳಿ ಇರುವ SDRF ಅನುದಾನ ಒಳಗೊಂಡಂತೆ ಒಟ್ಟಾರೆ ಕ್ರಿಯಾ ಯೋಜನೆಯನ್ನು ತಯಾರಿಸುವುದು.

13. ಜಿಲ್ಲಾಮಟ್ಟದಲ್ಲಿ ಪ್ರತಿ ದಿನ ಗ್ರಾಮೀಣ ಕುಡಿಯುವ ನೀರು ಸರಬರಾಜು ಸಮಸ್ಯೆ ನಿವಾರಣೆಗೆ ಜಿಯಾಲಾಜಿಸ್ಟ ಗಳನ್ನು ಒಳಗೊಂಡಂತೆ ಸಭೆ ನಡೆಸಿ ಕ್ರಮವಹಿಸುವುದು.

14. ತಾಲ್ಲೂಕು ಮಟ್ಟದಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾನೀಸ, ತಾಲ್ಲೂಕು ಪಂಚಾಯತಿ, ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ತಹಶೀಲ್ದಾರ ಇವರು ಪ್ರತಿ ದಿನ ಸಭೆ ಸೇರಿ ತಾಲ್ಲೂಕಿನ ಸಮಸ್ಯಾತ್ಮಕ ಗ್ರಾಮಗಳ ಬಗ್ಗೆ ಮಾಹಿತಿ ಪಡೆದು ಯಾವುದೇ ಕಾರಣಕ್ಕೂ ಗ್ರಾಮೀಣ ಕುಡಿಯುವ ನೀರಿನ ಸರಬರಾಜಿನಲ್ಲಿ ವ್ಯತ್ಯಯ ಆಗದಂತೆ ಕ್ರಮವಹಿಸುವುದು. ತಾಲ್ಲೂಕು ಮಟ್ಟದಲ್ಲಿ ಈ ಉದ್ದೇಶಕ್ಕಾಗಿ ಪ್ರತ್ಯೇಕ call center ಸ್ಥಾಪಿಸುವುದು.

15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ ಅಭಿಯಂತರರು, ಮತ್ತು ಕಿರಿಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇವರುಗಳು ಕಡ್ಡಾಯವಾಗಿ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುವುದನ್ನು ಖಾತರಿಪಡಿಸಿಕೊಳ್ಳುವುದು ಹಾಗೂ ಸಾರ್ವಜನಿಕರಿಂದ ಬರುವ ದೂರುಗಳನ್ನು ಸ್ವೀಕರಿಸಿ, ನಿವಾರಿಸಲು ಅನುವಾಗುವಂತೆ ಸದರಿ ಅಧಿಕಾರಿಗಳ ಮೊಬೈಲ್ ದೂರವಾಣಿಗಳು ಸಕ್ರಿಯವಾಗಿರುವಂತೆ ಅಗತ್ಯ ವ್ಯವಸ್ಥೆ ಮಾಡುವುದು.

16. ಅಗತ್ಯ ಸೇವೆಗಳ ನಿರ್ವಹಣೆಗೆ ಹಾಜರಾಗುವ ಅಧಿಕಾರಿ/ಸಿಬ್ಬಂದಿ, ಪಂಪ್/ಮೋಟಾರ್ ದುರಸ್ಥಿ ಅಂಗಡಿಗಳು ತೆರೆಯಲು ಕರ್ಫ್ಯೂ ಪಾಸ್ ಗಳ ವ್ಯವಸ್ಥೆ ಮಾಡುವುದು.

17. ಈಗಾಗಲೇ ಪೂರ್ಣಗೊಂಡಿರುವ ಬಹು ಗ್ರಾಮ ಕುಡಿಯುವ ನೀರು ಯೋಜನೆಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಹಾಗೂ ಎಲ್ಲಾ ಗ್ರಾಮಗಳಿಗೂ ನೀರು ಪೂರೈಕೆಯಾಗುತ್ತಿರುವ ಕುರಿತು ಖಾತರಿಪಡಿಸಿಕೊಳ್ಳುವುದು.

18. ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಗಿತಗೊಂಡಿದ್ದಲ್ಲಿ ಅವುಗಳ ಸುಸ್ಥಿತಿಗೆ ತುರ್ತು ಕ್ರಮವಹಿಸುವುದು.

19. ಜಿಲ್ಲೆಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಬಗ್ಗೆ ಸಾರ್ವಜನಿಕರಿಂದ ಬರುವ ದೂರುಗಳನ್ನು ಸ್ವೀಕರಿಸಿ ತಕ್ಷಣ ಕ್ರಮಕೈಗೊಳ್ಳಲು ಅನುವಾಗುವಂತೆ ನಿರ್ದಿಷ್ಟ ಸಹಾಯಕ / ಕಿರಿಯ ಅಭಿಯಂತರರನ್ನು ಗುರುತಿಸುವುದು.

20. ಏಕ ಗ್ರಾಮ ಕುಡಿಯುವ ನೀರಿನ ಯೋಜನೆಗಳಡಿ ಮುಂದುವರೆದ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಪೂರ್ಣಗೊಳಿಸಿ ನೀರು ಪೂರೈಕೆಗೆ ಕ್ರಮವಹಿಸುವುದು.

21. ಏಪ್ರಿಲ್, ಮೇ ಹಾಗೂ ಜೂನ್ ತಿಂಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಗ್ರಾಮಗಳ ಸಮೀಕ್ಷೆಯನ್ನು ಕೂಡಲೇ ಮಾಡಿಸಿ ಆ ಗ್ರಾಮಗಳ ಸಮಸ್ಯೆಗಳಿಗೆ ಪರಿಹಾರ ನೀಡುವ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಲು ಕ್ರಮವಹಿಸುವುದು.

22. ಕುಡಿಯುವ ನೀರು ಸರಬರಾಜು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುವ ಸಂದರ್ಭದಲ್ಲಿ ಸಮಸ್ಯಾತ್ಮಕ ಗ್ರಾಮಗಳಿಗೆ ಮೊದಲ ಆದ್ಯತೆ ನೀಡುವುದು. ಕ್ರಿಯಾ ಯೋಜನೆಯಲ್ಲಿ ಖಾಸಗಿ ಕೊಳವೆ ಬಾವಿಗಳ ಬಾಡಿಗೆ ಪಾವತಿ, ಟ್ಯಾಂಕರ್ ಗಳ ಮೂಲಕ ಸರಬರಾಜಿನ ಬಾಡಿಗೆ, ಹಾಲಿ ಇರುವ ಕೊಳವೆ ಬಾವಿಗಳ ಫ್ಲಶಿಂಗ್ ಮತ್ತು ಹೈಡ್ರೋಫ್ರಾಕ್ಚರಿಂಗ್ ಇವುಗಳಿಗೆ ಆದ್ಯತೆ ನೀಡುವುದು. ಅತಿ ಅವಶ್ಯಕ ಹಾಗೂ ಅನಿವಾರ್ಯವಾದಲ್ಲಿ ಮಾತ್ರ ಹೊಸ ಕೊಳವೆ ಬಾವಿಯನ್ನು ಕೊರೆಯುವುದು.

**ಗ್ರಾಮ ಪಂಚಾಯಿತಿ ಮಟ್ಟದ ಕಾರ್ಯಪಡೆ ಚಟುವಟಿಕೆಗಳ ಪರಿಶೀಲನೆ**

23. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮದ ಟಾಸ್ಕ್ ಫೋರ್ಸ್ ಚಟುವಟಿಕೆಗಳು ಹಾಗೂ ಇತರೆ ಮಹತ್ವದ ಕಾರ್ಯಗಳನ್ನು ನಿರ್ವಹಿಸಬೇಕಿರುವುದರಿಂದ ಸದರಿಯವರನ್ನು ಚೆಕ್ ಪೋಸ್ಟ್ ಗಳಲ್ಲಿ ನಿಯೋಜನೆ ಮಾಡದಂತೆ ಜಿಲ್ಲಾಧಿಕಾರಿಗಳೊಂದಿಗೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಚರ್ಚಿಸಿ ಕ್ರಮವಹಿಸುವುದು.

24. ಗ್ರಾಮ ಪಂಚಾಯಿತಿ ಕಾರ್ಯ ಪಡೆಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದರೂ ಪಂಚತಂತ್ರದಲ್ಲಿ ಮಾಹಿತಿಯನ್ನು ಇಂದೀಕರಿಸದೇ ಇರುವುದರಿಂದ ರಾಜ್ಯಮಟ್ಟದಲ್ಲಿ ಮಾಹಿತಿ ಲಭ್ಯವಿಲ್ಲದ ಕಾರಣ ಕಡ್ಡಾಯವಾಗಿ ಮಾಹಿತಿಯನ್ನು ದಾಖಲಿಸುವುದು.

25. ವಿವಿಧ ಇಲಾಖೆಗಳಡಿ ನೀಡಲಾಗುತ್ತಿರುವ ಪಿಂಚಣಿ ಪಾವತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖಾ ವತಿಯಿಂದ ನೀಡುತ್ತಿರುವ ಯೋಜನೆಗಳ ಸೌಲಭ್ಯಗಳನ್ನು ಜನರಿಗೆ ತಲುಪಿಸುತ್ತಿರುವುದನ್ನು ಗ್ರಾಮ ಮಟ್ಟದ ಕಾರ್ಯಪಡೆಯು ಖಾತರಿಪಡಿಸಿಕೊಳ್ಳುವುದು.

26.ಕೋವಿಡ್ 19 ತಡೆಗಟ್ಟುವಿಕೆಯ ಪ್ರಚಾರ ಸಂದರ್ಭದಲ್ಲಿ ಸ್ವಂತ ಪ್ರಚಾರ ಸಾಮಾಗ್ರಿಗಳು / ಘೋಷಣೆಗಳನ್ನು ಉಪಯೋಗಿಸದೆ ಸರ್ಕಾರದಿಂದ ಅನುಮೋದಿತ ಘೋಷಣೆಗಳನ್ನು ಮಾ ಉಪಯೋಗಿಸುವುದು.

27.ಈ ತನಕ RDPR ಟೆಲಿಗ್ರಾಂ ಗ್ರೂಪ್ ನಲ್ಲಿ ನೋಂದಣಿ ಮಾಡಿಕೊಳ್ಳದೇ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಕೂಡಲೇ ನೋಂದಣಿ ಮಾಡಿಕೊಳ್ಳುವಂತೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಕ್ರಮವಹಿಸುವುದು.

28.ಗ್ರಾಮ ಮಟ್ಟದ ಕಾರ್ಯಪಡೆಯು ಕೋವಿಡ್-19 ನ್ನು ತಡೆಗಟ್ಟುವ ವಿಚಾರದಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ಬಗ್ಗೆ ಜನ ಜಾಗೃತಿ ಮೂಡಿಸುವುದು. ಯಾವುದೇ ಸಂದರ್ಭದಲ್ಲಿಯೂ ಲಾಟಿ ಇತ್ಯಾದಿಗಳ ಬಳಕೆಯನ್ನು ನಿಷೇಧಿಸಲಾಗಿದೆ.

29.ಗ್ರಾಮದಲ್ಲಿನ ಕ್ವಾರಂಟೈನ್ ಆದ ವ್ಯಕ್ತಿ / ಕುಟುಂಬಗಳ ಬಗ್ಗೆ ಯಾವುದೇ ರೀತಿಯ ಕಡೆಗಣಿಸುವಿಕೆ, ಟೀಕಿಸುವಿಕೆ ಇತ್ಯಾದಿಗಳನ್ನು ಮಾಡದಿರುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

30.ಗ್ರಾಮದಲ್ಲಿ ಯಾರೊಬ್ಬರು ಹಸಿವಿನಿಂದ ಬಳಲದಂತೆ ಕಾರ್ಯಪಡೆಯು ಎಚ್ಚರಿಕೆ ವಹಿಸುವುದು.

31.ಗ್ರಾಮ ಕಾರ್ಯಪಡೆ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಉತ್ತಮ ಕಾರ್ಯ ನಿರ್ವಹಿಸುತ್ತಿರುವುದು ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ದಿನಸಿ ಅಂಗಡಿಗಳು / ನ್ಯಾಯಬೆಲೆ ಅಂಗಡಿಗಳ ಮುಂಭಾಗದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಶಾಮೀಯಾನಗಳನ್ನು ಹಾಕಿಸಿರುವುದು, ಕುಳಿತುಕೊಳ್ಳಲು ಕುರ್ಚಿಗಳ ವ್ಯವಸ್ಥೆ ಮಾಡಿರುವುದು ಉತ್ತಮ ಉದಾಹರಣೆಯಾಗಿದ್ದು, ಇಂತಹ ಕೆಲಸಗಳನ್ನು ಇತರೆ ಗ್ರಾಮ ಪಂಚಾಯಿತಿಗಳಲ್ಲಿ ಅಳವಡಿಸಿಕೊಳ್ಳುವುದು.

32.ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನದಡಿ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಿರುವ ಅನುದಾನದಿಂದ ಗ್ರಾಮ ಪಂಚಾಯಿತಿ / ಗ್ರಾಮ ಮಟ್ಟದ ಕಾರ್ಯಪಡೆ ಸದಸ್ಯರುಗಳಿಗೆ ತರಬೇತಿಗಳನ್ನು ಹಮ್ಮಿಕೊಳ್ಳಲು ಕ್ರಮವಹಿಸುವುದು.

ಮೇಲ್ಕಂಡ ಎಲ್ಲಾ ಅಂಶಗಳ ಮೇಲೆ ನಡವಳಿ ತಲುಪಿದ ಕೂಡಲೇ ಅಗತ್ಯ ಕ್ರಮ ಕೈಗೊಂಡು, ಅನುಪಾಲನಾ ವರದಿಯನ್ನು ಸಂಬಂಧಪಟ್ಟ ಆಯುಕ್ತರು, ನಿರ್ದೇಶಕರಿಗೆ ನೀಡಲು ಸೂಚಿಸಿ ವಂದನೆಗಳೊಂದಿಗೆ ಸಭೆ ಮುಕ್ತಾಯಗೊಳಿಸಲಾಯಿತು.

20/04/2020

**(ಎಲ್.ಕೆ.ಅತೀಕ್)**
**ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು**
**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ**

ಸಂಖ್ಯೆ:ಗ್ರಾಅಪ/61/ಯೋಉಮಾ/2020 ದಿನಾಂಕ: 17-04-2020

**ಇವರಿಗೆ:**

1. ಆಯುಕ್ತರು, ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ, ಬೆಂಗಳೂರು.

2. ಆಯುಕ್ತರು, ಕ.ಗ್ರಾ.ನೀ.ಸ. & ನೈರ್ಮಲ್ಯ ಇಲಾಖೆ, ಕಾವೇರಿಭವನ, ಬೆಂಗಳೂರು-09.
3. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
4. ನಿರ್ದೇಶಕರು, ಪಂಚಾಯತ್ ರಾಜ್ -1/ ಪಂಚಾಯತ್ ರಾಜ್ -2 / ಗ್ರಾಮೂಸೌ-I / ಗ್ರಾಮೂಸೌ-II / ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ನಿರ್ದೇಶಕರು, ಇ-ಆಡಳಿತ - ಇಲಾಖಾ ವೆಬ್ಸೈಟ್ ನಲ್ಲಿ ಸದರಿ ನಡವಳಿಯನ್ನು ಅಳವಡಿಸಲು ಕೋರಿದೆ
6. ಮುಖ್ಯ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು & ನೈರ್ಮಲ್ಯ ಇಲಾಖೆ.
7. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ನೀರು ಸರಬರಾಜು ಮತ್ತು & ನೈರ್ಮಲ್ಯ ಇಲಾಖೆ.
8. ಮುಖ್ಯ ಇಂಜಿನಿಯರ್, ಪಂ. ರಾಜ್. ಇಂ.ಇಲಾಖೆ. ಬೆಂಗಳೂರು.
9. ಮುಖ್ಯ ಕಾರ್ಯಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ.

**<u>ಪ್ರತಿ ಮಾಹಿತಿಗಾಗಿ:</u>**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಪ್ತ ಕಾರ್ಯದರ್ಶಿಗಳು
2. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಪಂಚಾಯತ್ ರಾಜ್